ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 28-04-2017

# ಪತ್ರಿಕಾ ಆಮಂತ್ರಣ

1. ಬಸವ ಜಯಂತಿ ಕಾರ್ಯಕ್ರಮ:

ಬಸವೇಶ್ವರ ಪುತ್ತಳಿಗೆ ಮಾಲಾರ್ಪಣೆ:

ಈಶ್ವರ ಬಿ. ಖಂಡ್ರೆ, ಪೌರಾಡಳಿತ ಮತ್ತು ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು.

**ದಿನಾಂಕ: 29-4-2017 ಶನಿವಾರ ಬೆಳಿಗ್ಗೆ 9.00 ಗಂಟೆಗೆ**

**ಸ್ಥಳ: ಬಸವೇಶ್ವರ ವೃತ್ತ, ಚಾಲುಕ್ಯ ಹೋಟೆಲ್ ಹತ್ತಿರ, ಬೆಂಗಳೂರು**

2. ಮ್ಯಾಂಗೋ ಪಿಕ್ಕಿಂಗ್ ಟೂರಿಸಂ

ಉದ್ಘಾಟನೆ:

ಆರ್. ರಾಮಲಿಂಗಾರೆಡ್ಡಿ,

ಸಾರಿಗೆ ಸಚಿವರು

ದಿನಾಂಕ: 29-5-2017 ರಂದು ಬೆಳಿಗ್ಗೆ 9-00 ಗಂಟೆಗೆ

ಸ್ಥಳ: ಕಬ್ಬನ್‌ಪಾರ್ಕ್ ವಾಹನ ನಿಲ್ದಾಣ (ವಿಶ್ವೇಶ್ವರಯ್ಯ ಮ್ಯೂಸಿಯಂ, ವೆಂಕಟಪ್ಪ ಆರ್ಟ್ ಗ್ಯಾಲರಿ ಹಿಂಬಾಗ)

3.ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಬಸವ ಜಯಂತಿ :

<u>ಉದ್ಘಾಟನೆ:</u>

ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ , ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು.

<u>ಅಧ್ಯಕ್ಷತೆ:</u>

ಆರ್. ವಿ. ದೇವರಾಜ್, ಅಧ್ಯಕ್ಷರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಹಾಗೂ ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ

ಮುಖ್ಯ ಅತಿಥಿಗಳು:

ಅನಂತಕುಮಾರ್, ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವರು.

ಕೆ.ಜೆ. ಜಾರ್ಜ್,
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರು.,

ಈಶ್ವರ ಖಂಡ್ರೆ,
ಪೌರಾಡಳಿತ ಹಾಗೂ ಸಾರ್ವಜನಿಕ ಉದ್ದಿಮೆ ಸಚಿವರು

ಶ್ರೀಮತಿ ಜಿ. ಪದ್ಮಾವತಿ,
ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ: 29–04–2017 ಶನಿವಾರ, ಸಮಯ : ಬೆಳಿಗ್ಗೆ 11–00 ಗಂಟೆಗೆ
ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು.

**4.Curtain Raiser of 4th Edition India Manufacturing Show ' IMS 2017 '**

**Chief Guest:**

**Shri A.S. Kiran Kumar, DS (APEX)**
**Secretary,Dept of space, chairman ISRO.**

**Date: 29-04-2017 Saturday, Time 5-30 Hours**

**Venue: Hotel Le Meriden, 28, Sankey Road, Vasanth Nagar, Bengaluru.**

## 5. Press Conference:

**Shri Pavanjeet Singh Sandhu IPS**
**Inspector General, South and STC BSF, Bengaluru**

**OORJA-CAPFs Youth U-19 Football talent hunt Tournament-2017**

**Curtain raiser to Oorja by CAPF followed by an exhibition match**

**Date: 1-5-2017 Monday 2-30 P.M.**

**Venue: Sree Kanteerava Stadium Bengaluru.**

**RSVP: Shri Ritesh Thakur,**

**Dy. Commandant & PRO, BSF, Mob: 9418461331**

**6. ಪತ್ರಿಕಾಗೋಷ್ಠಿ:**

ಡಾ: ಶಾಲಿನಿ ರಜನೀಶ್,

ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ದಿನಾಂಕ: 02–05–2017 ಮಂಗಳವಾರ ಅಪರಾಹ್ನ 12–00 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ 218 ವಿಕಾಸ ಸೌಧ, ಬೆಂಗಳೂರು

7. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 'ಶ್ರೀ ಭಗೀರಥ ಜಯಂತಿ'.

<u>ಉದ್ಘಾಟನೆ</u>

ಸಿದ್ದರಾಮಯ್ಯ,
ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ.

<u>ಮುಖ್ಯ ಅತಿಥಿಗಳು:</u>

ಅನಂತಕುಮಾರ್, ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವರು.

ಕೆ.ಜೆ. ಜಾರ್ಜ್,
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರು.,

ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ , ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು

ಶ್ರೀಮತಿ ಜಿ. ಪದ್ಮಾವತಿ,
ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

<u>ಅಧ್ಯಕ್ಷತೆ:</u>

ಆರ್. ವಿ. ದೇವರಾಜ್, ಅಧ್ಯಕ್ಷರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಹಾಗೂ ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ.

ದಿನಾಂಕ: 02–05–2017 ಮಂಗಳವಾರ, ಸಮಯ : ಸಂಜೆ 6–00 ಗಂಟೆಗೆ
ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು.

8. ಕಿದ್ವಾಯಿ ಕ್ಯಾನ್ಸರ್ ಸಂಸ್ಥೆ:
ಇನ್‌ಫೋಸಿಸ್ ಸಂಸ್ಥೆಯವರು ದೇಣಿಗೆಯಾಗಿ ನೀಡಿರುವ ಧರ್ಮಶಾಲೆಯ ಶಿಲಾನ್ಯಾಸ ಸಮಾರಂಭ ಹಾಗೂ ಲೀನಿಯರ್ ಆಕ್ಸಲರೇಟರ್ ಯಂತ್ರದ ಲೋಕಾರ್ಪಣೆ.

<u>ಉದ್ಘಾಟನೆ:</u>

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ದಿನಾಂಕ: 2–5–2017, ಮಂಗಳವಾರ ಸಮಯ : ಬೆಳಿಗ್ಗೆ 10.30 ಗಂಟೆಗೆ

ಸ್ಥಳ: ಕಿದ್ವಾಯಿ ಕ್ಯಾನ್ಸರ್ ಸಂಸ್ಥೆ ಆವರಣ,ಬೆಂಗಳೂರು

9. ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆಯನ್ನು ಇ–ಆಫೀಸ್ ಆಗಿ ಪರಿವರ್ತನೆ ಮಾಡುವ ಕಾರ್ಯಕ್ರಮ

<u>ಉದ್ಘಾಟನೆ:</u>

ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ , ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು

ದಿನಾಂಕ: 02–05–2017, ಮಂಗಳವಾರ ಸಮಯ : ಬೆಳಿಗ್ಗೆ 11–00 ಗಂಟೆಗೆ

**ಸ್ಥಳ: ಕೊಠಡಿ ಸಂಖ್ಯೆ 419, ನಾಲ್ಕನೇ ಮಹಡಿ, ವಿಕಾಸಸೌಧ, ಬೆಂಗಳೂರು.**

## ಪತ್ರಿಕಾ ಪ್ರಕಟಣೆ

## ಸಿರಿಧಾನ್ಯಗಳು ಭವಿಷ್ಯದ ಭರವಸೆ ಬೆಳೆಗಳು –

**– ಸಚಿವ ಕೃಷ್ಣ ಬೈರೇಗೌಡ**

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

ರಾಗಿ, ಜೋಳ ಮತ್ತು ನವಣೆ ಇವುಗಳು ಆರೋಗ್ಯಕ್ಕೆ ತುಂಬಾ ಉತ್ತಮವಾದಂತ ಧಾನ್ಯಗಳು, ಆದ್ದರಿಂದ ಧಾನ್ಯಗಳನ್ನು ಭವಿಷ್ಯದ ಧಾನ್ಯಗಳು ಎಂದು ಕರೆಯುತ್ತೇವೆ ಎದು ಕೃಷಿ ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ಇಂದು ಅರಮನೆ ಮೈದಾನದಲ್ಲಿ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ನಬಾರ್ಡ್ ಇವುಗಳ ಸಹಭಾಗಿತ್ವದಲ್ಲಿ ಏರ್ಪಡಿಸಲಾದ ಮೂರು ದಿನಗಳ ಸಾವಯವ ಸಿರಿಧಾನ್ಯಗಳ ರಾಷ್ಟ್ರೀಯ ಸಮಾವೇಶ ಮತ್ತು ವಸ್ತು ಪ್ರದರ್ಶನದಲ್ಲಿ ಪ್ರಾಸ್ತಾವಿಕ ಭಾಷಣ ಮಾಡುತ್ತಾ ದೇಶದಲ್ಲೇ ಮೊದಲ ಬಾರಿಗೆ ಕರ್ನಾಟಕದಲ್ಲಿ ಈ ಮೇಳವನ್ನು ನಡೆಸುತ್ತಿದ್ದೇವೆ. 2004 ರಲ್ಲಿ ಸಾವಯವ ಕೃಷಿ ನೀತಿಯನ್ನು ಜಾರಿ ಮಾಡಿದಾಗ 2,500 ಹೆಕ್ಟೇರ್ ಪ್ರದೇಶದಲ್ಲಿ ನಮ್ಮ ರೈತರು ಸಾವಯವ ಕೃಷಿಯನ್ನು ಮಾಡುತ್ತಿದ್ದರು. ಇಂದು 1,80,000 ಹೆಕ್ಟೇರ್‌ನಲ್ಲಿ ಸಾವಯವ ಕೃಷಿ ನಡೆಯುತ್ತಿದೆ ಮತ್ತು ಮಣ್ಣಿನ ಆರೋಗ್ಯವನ್ನು ಕಾಪಾಡಲು ರಾಸಾಯನಿಕ ಕೃಷಿಯಿಂದ ಸಾವಯವ ಕೃಷಿಯೆಡೆಗೆ ರೈತರನ್ನು ಪರಿವರ್ತಿಸುತ್ತಿದ್ದೇವೆ ಎಂದರು.

ನಮ್ಮ ರಾಜ್ಯದಲ್ಲಿ ಅಸಂಘಟಿತ ಮತ್ತು ಸಣ್ಣ ರೈತರು ಇರುವುದರಂದ 14 ಸಾವಯವ ರೈತರ ಒಕ್ಕೂಟಗಳನ್ನು ರಚನೆ ಮಾಡಿದ್ದೇವೆ. ಈ ಒಕ್ಕೂಟಗಳು ರೈತರು ಬೆಳೆದ ಬೆಳೆಗಳನ್ನು ಖಾಸಗಿ ಕಂಪನಿಗಳಿಗೆ ನ್ಯಾಯಯುತ ಬೆಲೆ ನೀಡುವ ರೀತಿ ಮಾಡುತ್ತಿವೆ ಎಂದರು. ಇಂದು ಬಿಗ್ ಬಾಸ್ಕೆಟ್ ಎಂಬ ಕಂಪನಿ ನೇರವಾಗಿ ರೈತರಿಂದ ಉತ್ಪನ್ನಗಳನ್ನು ಕೊಂಡುಕೊಳ್ಳಲು ಒಪ್ಪಂದ ಮಾಡಿಕೊಳ್ಳುತ್ತಿದೆ.

ಕೇಂದ್ರ ಸಾಂಖ್ಯಿಕ ಸಚಿವ ಸದಾನಂದ ಗೌಡ ಮಾತನಾಡಿ ಗ್ರಾಹಕ ಮತ್ತು ರೈತರ ನಡುವೆ ನೇರ ಸಂಪರ್ಕದಿಂದ ರೈತರ ಅಭಿವೃದ್ಧಿಯಾಗುತ್ತದೆ. ಈ ಕಾರ್ಯಕ್ರಮವು ರೈತರ ಭವಿಷ್ಯದ ಹೊಸ ಹೆಜ್ಜೆ ಎಂದು ಬಣ್ಣಿಸಿದರು.

ಇವತ್ತಿನ ದಿನಗಳಲ್ಲಿ ಮಳೆ ಸರಿಯಾದ ರೀತಿ ಬೀಳದೆ ದೇಶದ ರೈತರಿಗೆ ಹತ್ತು ಹಲವು ಸಮಸ್ಯೆಗಳು ಸೃಷ್ಟಿಯಾಗಿವೆ. ಆದ್ದರಿಂದ ನಮ್ಮ ರೈತರು ಕಡಿಮೆ ನೀರನ್ನು ಬಳಸಿ ಸಾವಯವ ಕೃಷಿ ಮಾಡಬೇಕು ಎಂದರು.

ಗ್ರಾಮೀಣಾಭಿವೃದ್ಧಿ ಸಚಿವ ಹೆಚ್.ಕೆ. ಪಾಟೀಲ್ ಮಾತನಾಡಿ ಸಿರಿಧಾನ್ಯಗಳು ಆರೋಗ್ಯದಿಂದ ಕೂಡಿರುತ್ತವೆ. ಸಿರಿಧಾನ್ಯಗಳ ಸೇವನೆಯಿಂದ ಮನುಷ್ಯನಿಗೆ ಬರುವ ಹಲವು ಕಾಯಿಲೆಗಳಿಗೆ ಮದ್ದಾಗಿವೆ. ನಮ್ಮ ಸರ್ಕಾರವು ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸಲು ನೇರವಾಗಿ ರೈತ ಮತ್ತು ಗ್ರಾಹಕರ ನಡುವಿನ ಸಂಬಂಧವನ್ನು ವೃದ್ಧಿಮಾಡುತ್ತಿದೆ ಎಂದರು.

ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರಗಳು ರೈತರು ಬೆಳೆದ ಬೆಳೆಗಳಿಗೆ ಈಗ ನೀಡುತ್ತಿರುವ ಬೆಂಬಲ ಬೆಲೆ ಕಡಿಮೆ ಇದೆ. ಇದನ್ನು ಪ್ರಸಕ್ತ ಸಾಲಿನ ಮನುಷ್ಯನ ಜೀವನ ಆಧಾರಿತ ಖರ್ಚು ವೆಚ್ಚಗಳನ್ನು ನೋಡಿಕೊಂಡು ಬೆಂಬಲ ಬೆಲೆ ಹೆಚ್ಚಿಸಬೇಕು ಎಂದು ಹೇಳಿದರು.

ಕೇಂದ್ರದ ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ಸಚಿವ ಅನಂತಕುಮಾರ್ ಮಾತನಾಡಿ ಕೇಂದ್ರ ಸರ್ಕಾರವು ರೈತರಿಗೆ ರಾಸಾಯನಿಕ ಗೊಬ್ಬರವನ್ನು ಹೆಚ್ಚಾಗಿ ರೈತರು ಬಳಸಬಾರದು, ಸಾವಯವ ಗೊಬ್ಬರವನ್ನು ಬಳಸಬೇಕು. ಇದರಿಂದ ಮಣ್ಣಿನ ಗುಣಮಟ್ಟ ತುಂಬಾ ಚೆನ್ನಾಗಿರುತ್ತದೆ. ನಾನು ಸಚಿವನಾದ ಮೇಲೆ ಬೆಳೆಗಳಿಗೆ ಕ್ರಿಮಿಕೀಟಗಳು ಹರಡದೆ ಇರುವ ರೀತಿ ಬೇವಿನ ಹಿಂಡಿ ಇದನ್ನು ಹಾಕಿ ರೈತರು ಬೆಳೆಗಳನ್ನು ಬೆಳೆಯಬೇಕು ಎಂದು ಸಲಹೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಯೋಜನಾ ಸಚಿವ ಎಂ.ಆರ್. ಸೀತಾರಾಮ್, ಶಾಸಕರಾದ ಡಾ. ಆಶ್ವಥ್ ನಾರಾಯಣ್, ರಾಮಚಂದ್ರ ಗೌಡ, ಮೊದಲಾದವರು ಭಾಗವಹಿಸಿದ್ದರು.

ಎಸ್‌ಎಂ:ಜೆಡಿ:ಜಿಪಿಆರ್.

## ಮೇ 2 ರಂದು ಶ್ರೀ ಭಗೀರಥ ಜಯಂತಿ

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಮೇ 2 ರಂದು ಸಂಜೆ 6–00 ಗಂಟೆಗೆ ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ "ಶ್ರೀ ಭಗೀರಥ ಜಯಂತಿ" ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಪರಮಪೂಜ್ಯ ಜಗದ್ಗುರು ಶ್ರೀ ಪುರುಷೋತ್ತಮಾನಂದಪುರಿ ಮಹಾಸ್ವಾಮೀಜಿಗಳು, ಮದುರೆ, ಹೊಸದುರ್ಗ ಇವರ ಸಾನಿಧ್ಯದಲ್ಲಿ ಸಮಾರಂಭ ಜರುಗಲಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂದು "ಶ್ರೀ ಭಗೀರಥ ಜಯಂತಿ" ಸಮಾರಂಭದ ಉದ್ಘಾಟನೆಯನ್ನು ನೆರವೇರಿಸಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ಆರ್. ವಿ. ದೇವರಾಜ್, ಅಧ್ಯಕ್ಷರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಹಾಗೂ ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ. ಅವರು ವಹಿಸಲಿದ್ದಾರೆ.

ಅನಂತಕುಮಾರ್, ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವರು. ಕೆ.ಜೆ. ಜಾರ್ಜ್, ನಗರಾಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರು., ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ , ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು, ಶ್ರೀಮತಿ ಜಿ. ಪದ್ಮಾವತಿ, ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅವರುಗಳು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿರುವ ಸಮಾರಂಭದಲ್ಲಿ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಅಂದು ಚನ್ನಬಸಪ್ಪ, ನಿವೃತ್ತ ತಹಸೀಲ್ದಾರ್, ತಿಪಟೂರು ಅವರು ಶ್ರೀ ಭಗೀರಥರನ್ನು ಕುರಿತು ಉಪನ್ಯಾಸ ನೀಡುವರು.

ಸಂಜೆ 5.00 ಗಂಟೆಗೆ ಬೆಂಗಳೂರಿನ ಶ್ರೀಮತಿ ಮಾನಸ ಹೊಳ್ಳ ಮತ್ತು ತಂಡದವರಿಂದ ಸುಗಮ ಸಂಗೀತ ಮತ್ತು ನಾಡಗೀತೆ ಕಾರ್ಯಕ್ರಮ.

ರಾಜ್ಯದ ವಿವಿಧ ಜಿಲ್ಲೆಗಳ ತಂಡದಿಂದ ಜಾನಪದ ಕಲಾ ಪ್ರದರ್ಶನವನ್ನು ಟೌನ್‌ಹಾಲ್ ವೃತ್ತದಿಂದ ರವೀಂದ್ರ ಕಲಾಕ್ಷೇತ್ರದವರೆಗೆ ಹಮ್ಮಿಕೊಳ್ಳಲಾಗಿದೆ.

ಎಂಆರ್‌ಎಂ::ಜಿಪಿಆರ್.

## ಕಲಾಪ್ರದರ್ಶನಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

ಕರ್ನಾಟಕ ಲಲಿತಕಲಾ ಅಕಾಡೆಮಿಯು 2017–18 ನೇ ಸಾಲಿನಲ್ಲಿ 46ನೇ ವಾರ್ಷಿಕ ಕಲಾಪ್ರದರ್ಶನ ಹಾಗೂ ಸುವರ್ಣ–ಕಲಾಪುರಸ್ಕಾರ ವಿಶೇಷ ಬಹುಮಾನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಿದೆ.

ಕರ್ನಾಟಕದ ನಿವಾಸಿಗಳಾಗಿರುವ ಅಥವಾ ಕಳೆದ ಐದು ವರ್ಷಗಳಿಂದ ಕರ್ನಾಟಕದಲ್ಲಿ ನೆಲೆಸಿರುವ ಕಲಾವಿದರು ಈ ಕಲಾಪ್ರದರ್ಶನದಲ್ಲಿ ಭಾಗವಹಿಸಬಹುದಾಗಿದೆ. ಈ ಕಲಾ ಪ್ರದರ್ಶನಕ್ಕೆ ತೀರ್ಪುಗಾರರಿಂದ 46ನೇ ವಾರ್ಷಿಕ ಕಲಾಪ್ರದರ್ಶನ ಬಹುಮಾನಕ್ಕೆ ಆಯ್ಕೆ ಮಾಡಿದ ಒಟ್ಟು ಹತ್ತು ಕಲಾಕೃತಿಗಳಿಗೆ ತಲಾ ರೂ. 25,000/– ನಗದು ಬಹುಮಾನ, ಪ್ರಶಸ್ತಿ ಪತ್ರ, ಪ್ರಶಸ್ತಿ ಫಲಕ ನೀಡಿ ಗೌರವಿಸಲಾಗುವುದು.

ಸುವರ್ಣ–ಸಂಭ್ರಮ–ಕಲಾ ಪುರಸ್ಕಾರ ಬಹುಮಾನಕ್ಕೆ ಆಯ್ಕೆ ಮಾಡಿದ 10 ಕಲಾವಿದರಿಗೆ ರೂ 20,000 ನಗದು ಬಹುಮಾನ, ಪ್ರಶಸ್ತಿ ಪತ್ರ, ಪ್ರಶಸ್ತಿ ಫಲಕ ನೀಡಿ ಗೌರವಿಸಲಾಗುವುದು.

ಬಹುಮಾನ ಆಯ್ಕೆಯಲ್ಲಿ ತೀರ್ಪುಗಾರರದೇ ಅಂತಿಮ ತೀರ್ಮಾನವಾಗಿರುತ್ತದೆ. ಈ ಕಲಾ ಪ್ರದರ್ಶನದಲ್ಲಿ ಭಾಗವಹಿಸಲಿಚ್ಛಿಸುವ ಕಲಾವಿದರು ತಮ್ಮ ಕಲಾಕೃತಿಗಳ ಛಾಯಾಚಿತ್ರಗಳನ್ನು ನಿಗದಿತ ಅರ್ಜಿಯೊಂದಿಗೆ ಸಲ್ಲಿಸಬೇಕು. 2016 ರ ಇಸವಿಗಿಂತ ಹಿಂದೆ ರಚಿತವಾದ ಕಲಾಕೃತಿಗಳಾಗಲೀ, ಈಗಾಗಲೇ ಬೇರೆ ಕಲಾಪ್ರದರ್ಶನದಲ್ಲಿ ಬಹುಮಾನ ಪಡೆದಿರುವ ಕಲಾಕೃತಿಗಳನ್ನಾಗಲೀ, ಅಕಾಡೆಮಿ ಬಹುಮಾನಕ್ಕಾಗಿ ಪರಿಗಣಿಸುವುದಿಲ್ಲ. ಆಯ್ಕೆ ಸಮಿತಿಯು ಮೂಲಕೃತಿಗಳ ಛಾಯಾಚಿತ್ರ ಆಧರಿಸಿ ಆಯ್ಕೆ ಮಾಡಿದ ನಂತರ ಮೂಲಕೃತಿಗಳನ್ನು ಕಳಿಸಬೇಕಾಗುತ್ತದೆ.

ಈ ಕಲಾಕೃತಿಗಳು 3 x 3 ಅಡಿ ಅಳತೆಯ ಒಳಗಿರಬೇಕು. ಕರ್ನಾಟಕ ಲಲಿತಕಲಾ ಅಕಾಡೆಮಿಗೆ ಅರ್ಜಿ ಸಲ್ಲಿಸಲು ಮೇ 22 ಕೊನೆಯ ದಿನವಾಗಿರುತ್ತದೆ. (ಸರ್ಕಾರಿ ರಜಾ ದಿನಗಳನ್ನು ಹೊರತುಪಡಿಸಿ)

ಅರ್ಜಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಲಲಿತಕಲಾ ಅಕಾಡೆಮಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002, ಇಲ್ಲಿ ಖುದ್ದಾಗಿ ಅಥವಾ ರೂ 10/– ಗಳ ಅಂಚೆ ಚೀಟಿ ಲಗತ್ತಿಸಿದ ಸ್ವ–ವಿಳಾಸವುಳ್ಳ (ದೂರವಾಣಿ ಸಂಖ್ಯೆಯೊಂದಿಗೆ) ಲಕೋಟೆಯನ್ನು ಕಳುಹಿಸಿ ಪಡೆಯಬಹುದಾಗಿದೆ. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 080 – 22480297 ಇವರನ್ನು ಸಂಪರ್ಕಿಸಬಹುದಾಗಿದೆ.

ಎಂಆರ್‌ಎಂ;ಜಿಪಿಆರ್.

# ಏಪ್ರಿಲ್ 29 ರಂದು ಬಸವ ಜಯಂತಿ

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಏಪ್ರಿಲ್ 29 ರಂದು ಶನಿವಾರ ಬೆಳಿಗ್ಗೆ 11.00 ಗಂಟೆಗೆ ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಬಸವ ಜಯಂತಿಯನ್ನು ಹಮ್ಮಿಕೊಂಡಿದೆ.

ಈ ಸಮಾರಂಭದ ಉದ್ಘಾಟನೆಯನ್ನು ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಶ್ರೀಮತಿ ಉಮಾಶ್ರೀ ಅವರು ನೆರವೇರಿಸಲಿದ್ದಾರೆ.

ಅಧ್ಯಕ್ಷರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಹಾಗೂ ಶಾಸಕರು, ಚಿಕ್ಕಪೇಟೆ ಕ್ಷೇತ್ರ ಆರ್.ವಿ. ದೇವರಾಜ್ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಬಸವ ಜಯಂತಿ ಅಂಗವಾಗಿ ಅಂದು ಬೆಳಿಗ್ಗೆ 9.00 ಗಂಟೆಗೆ ಬಸವೇಶ್ವರ ವೃತ್ತದಿಂದ (ಹೋಟೆಲ್ ಚಾಲುಕ್ಯ ಹತ್ತಿರ) ರವೀಂದ್ರ ಕಲಾಕ್ಷೇತ್ರದವರೆಗೆ ಬಸವಣ್ಣನವರ ಸ್ತಬ್ದ ಚಿತ್ರದೊಂದಿಗೆ ಜಾನಪದ ಕಲಾ ತಂಡಗಳ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗಿದೆ.

ವಿವಿಧ ಜಿಲ್ಲೆಗಳ ಜಾನಪದ ಕಲಾತಂಡಗಳು ಈ ಸ್ತಬ್ದ ಚಿತ್ರ ಮೆರವಣಿಗೆಯಲ್ಲಿ ಪಾಲ್ಗೊಳ್ಳಲಿದೆ. ಅಂದು ಬೆಳಿಗ್ಗೆ 10.00 ರಿಂದ 11.00 ಗಂಟೆವರೆಗೆ ಕುಮಾರ ಕಣವಿ ಮತ್ತು ಕು. ಮಾಲಾಶ್ರೀ ಕಣವಿ ಅವರಿಂದ ವಚನ ಗಾಯನ ಹಾಗೂ ಮಧ್ಯಾಹ್ನ 1.00 ರಿಂದ 2.00 ಗಂಟೆವರೆಗೆ ಬೆಂಗಳೂರಿನ ರಂಗಭಾರತಿ ತಂಡದವರಿಂದ ವಚನ ರೂಪಕ – ಸಿಂಗಿರಾಜ ಕಾರ್ಯಕ್ರಮ ನಡೆಯಲಿದೆ.

ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಅನಂತಕುಮಾರ್, ನಗರಾಭಿವೃದ್ಧಿ ಮತ್ತು ನರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ. ಜಾರ್ಜ್, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ, ಪೌರಾಡಳಿತ ಹಾಗೂ ಸಾರ್ವಜನಿಕ ಉದ್ದಿಮೆ ಸಚಿವ ಈಶ್ವರ ಖಂಡ್ರೆ, ಶ್ರೀಮತಿ ಶಕುಂತಲ ಟಿ. ಶೆಟ್ಟಿ ಶಾಸಕರು, ಪುತ್ತೂರು ವಿಧಾನ ಸಭಾ ಕ್ಷೇತ್ರ ಹಾಗೂ ಸಂಸದೀಯ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ. ಶಾಮನೂರು ಶಿವಶಂಕರಪ್ಪ, ಶಾಸಕರು, ದಾವಣಗೆರೆ ವಿಧಾನಸಭಾ ಕ್ಷೇತ್ರ ಹಾಗೂ ಅಧ್ಯಕ್ಷರು, ಅಖಿಲ ಭಾರತ ವೀರಶೈವ ಮಹಾಸಭಾ, ಬೆಂಗಳೂರು ಇವರುಗಳು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಸಾಹಿತಿಗಳು ಮತ್ತು ಚಿಂತಕರಾದ ಡಾ. ಬಸವರಾಜ ಸಬರದ ಅವರಿಂದ ವಿಶೇಷ ಉಪನ್ಯಾಸ ನಡೆಯಲಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 30-04-2017ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀ.ಜಿ.ಜಿ. ನವೀನ್ ಕುಮಾರ್ ಮತ್ತು ತಂಡ, ಮಂಡ್ಯ ಜಿಲ್ಲೆ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಶ್ರೀ. **ಮೌನೇಶ್. ಟಿ. ಚನ್ನದಾಸರ ಮತ್ತು ತಂಡ, ಕೊಪ್ಪಳ ಜಿಲ್ಲೆ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗದಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ , ರಾಜಾಜಿನಗರ , ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

## ಬಸವೇಶ್ವರರ ಭಾವಚಿತ್ರ ವಾರ್ತಾ ಇಲಾಖೆಯಲ್ಲಿ ಲಭ್ಯ

**ಬೆಂಗಳೂರು ಏಪ್ರಿಲ್ 28(ಕರ್ನಾಟಕ ವಾರ್ತೆ)**

**ಸರ್ಕಾರಿ ಕಛೇರಿಗಳಲ್ಲಿ ಜಗಜ್ಯೋತಿ ಬಸವೇಶ್ವರರ ಭಾವಚಿತ್ರವನ್ನು ಕಡ್ಡಾಯವಾಗಿ ಪ್ರದರ್ಶಿಸುವಂತೆ ಸರ್ಕಾರ ಸುತ್ತೋಲೆ ಹೊರಡಿಸಿರುವ ಹಿನ್ನಲೆಯಲ್ಲಿ ಸರ್ಕಾರ ಅನುಮೋದಿಸಿರುವ ಬಸವೇಶ್ವರರ ಭಾವಚಿತ್ರದ ಪ್ರತಿಗಳು ನಾಳೆಯಿಂದ (29-4-2017) ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಛಾಯಾಚಿತ್ರ ಶಾಖೆ ಹಾಗೂ ಜಿಲ್ಲಾ ಕಛೇರಿಗಳಲ್ಲಿ ಲಭ್ಯವಿದೆ. ಅಲ್ಲದೆ ಇಲಾಖೆಯ ವೆಬ್‌ಸೈಟ್ karnatakainformation.gov.in ನಿಂದಲೂ ಡೌನ್‌ಲೋಡ್ ಮಾಡಿಕೊಂಡು ಮುದ್ರಿಸಿ ಬಳಸಬಹುದಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್.ಆರ್. ವಿಶುಕುಮಾರ್ ಅವರು ತಿಳಿಸಿದ್ದಾರೆ.**

| |
|---|
| **ಛಾಯಾಚಿತ್ರ:** |
| **ಸರ್ಕಾರ ಅನುಮೋದನೆ ನೀಡಿರುವ ಶ್ರೀ ಜಗಜ್ಯೋತಿ ಬಸವೇಶ್ವರ ಅವರ ಛಾಯಾಚಿತ್ರ** |

## ಬಿ.ಎಸ್.ಎಫ್ ಆಶ್ರಯದಲ್ಲಿ

## 19 ವರ್ಷದೊಳಗಿನ ಫುಟ್‌ಬಾಲ್ ಟೂರ್ನಮೆಂಟ್

ಬೆಂಗಳೂರು ಏಪ್ರಿಲ್ 28(ಕರ್ನಾಟಕ ವಾರ್ತೆ)

ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಸಂಯುಕ್ತಾಶ್ರಯದಲ್ಲಿ ಅಖಿಲ ಭಾರತ ಪೊಲೀಸ್ ಕ್ರೀಡಾ ನಿಯಂತ್ರಣ ಮಂಡಳಿಯ ವತಿಯಿಂದ 19 ವರ್ಷದೊಳಗಿನ ಫುಟ್‌ಬಾಲ್ ಟೂರ್ನಮೆಂಟನ್ನು ಆಯೋಜಿಸಲಾಗಿದೆ.

ಇದೇ ಅಕ್ಟೋಬರ್‌ನಲ್ಲಿ 2017ರಲ್ಲಿ ಭಾರತವು ಫೀಫಾ 17 ವರ್ಷದೊಳಗಿನವರ ವಿಶ್ವಕಪ್ ಫುಟ್‌ಬಾಲ್ ಟೂರ್ನಿಯ ಆತಿಥ್ಯ ವಹಿಸಲಿದೆ. ಈ ಹಿನ್ನೆಲೆಯಲ್ಲಿ ಪ್ರತಿ ಮಗು ಫುಟ್‌ಬಾಲ್ ಆಡುವ ಅವಕಾಶ ನೀಡುವ "ಮಿಷನ್ XI ಮಿಲಿಯನ್" ಎಂಬ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ.

ಫೀಫಾ ವಿಶ್ವಕಪ್ 17 ವರ್ಷವಯಸ್ಸಿನೊಳಗಿನ ವಿಶ್ವಕಪ್ ಟೂರ್ನಿಗೆ ಪೂರ್ವಭಾವಿಯಾಗಿ ಯುವ ವಿದ್ಯಾರ್ಥಿಗಳಲ್ಲಿ ಸ್ಪರ್ಧಾ ಮನೋಭಾವ ಮೂಡಿಸಲು **OORJA-CAPFs Youth U-19 Football talent hunt Tournament-2017** ಅನ್ನು ಹಮ್ಮಿಕೊಳ್ಳುವಂತೆ ಗೃಹ ಸಚಿವಾಲಯವು ಸೂಚಿಸಿದೆ.

ಬಿ.ಎಸ್.ಎಫ್‌ನ ಆಶ್ರಯದಲ್ಲಿ ಮೊದಲ ಹಂತದಲ್ಲಿ ಕರ್ನಾಟಕ ರಾಜ್ಯಮಟ್ಟದ ಟೂರ್ನಮೆಂಟ್ ಬೆಂಗಳೂರಿನಲ್ಲಿ ಮೇ 7 ರಿಂದ 15 ರವರೆಗೆ ನಡೆಯಲಿದೆ. ರಾಜ್ಯದ ವಿವಿಧ ಜಿಲ್ಲೆಗಳು ಹಾಗೂ ಸಂಘಸಂಸ್ಥೆಗಳ 16 ತಂಡಗಳು ಈ ಟೂರ್ನಮೆಂಟ್‌ನಲ್ಲಿ ಪಾಲ್ಗೊಳ್ಳಲಿವೆ.

ಎರಡನೇ ಹಂತದಲ್ಲಿ ಬೆಂಗಳೂರಿನಲ್ಲಿ ದಕ್ಷಿಣದ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳನ್ನೊಳಗೊಂಡ ಪ್ರಾದೇಶಿಕ ಮಟ್ಟದ ಟೂರ್ನಮೆಂಟ್ ಜೂನ್ 17 ರಿಂದ 25 ರವರೆಗೆ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಈ ಕ್ರೀಡಾಕೂಟ ನಡೆಯಲಿದೆ.

ಮೂರನೇ ಹಂತದಲ್ಲಿ ರಾಷ್ಟ್ರಮಟ್ಟದಲ್ಲಿ ಜುಲೈ ತಿಂಗಳಲ್ಲಿ ಪಂದ್ಯಾವಳಿ ನಡೆಯಲಿದ್ದು ವಿಜೇತರಿಗೆ 5.00 ಲಕ್ಷ ರೂ. ನಗದು ಬಹುಮಾನ ನೀಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# ಅಮಾನತ್ತು

ಬೆಂಗಳೂರು ಏಪ್ರಿಲ್ 28 (ಕರ್ನಾಟಕ ವಾರ್ತೆ)

ಡಾ: ನೀಲಮ್ಮ ಎಸ್. ರೆಡ್ಡಿ, ಜಿಲ್ಲಾ ಕುಟುಂಬ ಕಲ್ಯಾಣ ಸೇವೆಗಳು, ಯಾದಗಿರಿ ಜಿಲ್ಲೆ ಇವರ ವಿರುದ್ಧ ಕರ್ತವ್ಯಲೋಪ/ದುರ್ನಡತೆ ಆರೋಪದ ಬಗ್ಗೆ ಇಲಾಖಾ ವಿಚಾರಣೆ ಬಾಕಿ

ಇರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ಅಮಾನತ್ತು ಮಾಡಲಾಗಿದೆ ಎಂದು ಆದೇಶ ಹೊರಡಿಸಲಾಗಿದೆ.

## ಜನಸಾಮಾನ್ಯರಿಗೆ ಕೈಗೆಟುಕುವ ದರದಲ್ಲಿ ಗುಣಮಟ್ಟದ ಚಿಕಿತ್ಸೆ- ನ್ಯಾಯಮೂರ್ತಿ ವಿಕ್ರಮ್‌ಜೀತ್ ಸೇನ್

ಬೆಂಗಳೂರು ಏಪ್ರಿಲ್ 28(ಕರ್ನಾಟಕ ವಾರ್ತೆ)

ರಾಜ್ಯದ ಸರ್ಕಾರಿ ಸೇರಿದಂತೆ ಎಲ್ಲಾ ಖಾಸಗಿ ಆಸ್ಪತ್ರೆಗಳಲ್ಲಿ ಜನಸಾಮಾನ್ಯರಿಗೆ ಗುಣಮಟ್ಟದ ಚಿಕಿತ್ಸೆ ಕೈಗೆಟುಕುವ ದರದಲ್ಲಿ ನೀಡುವ ಕುರಿತಂತೆ ತಜ್ಞರ ಸಮಿತಿ ಅಂತಿಮ ವರದಿ ಸಿದ್ದಪಡಿಸುತ್ತಿದೆ ಎಂದು ಸಮಿತಿಯ ಮುಖ್ಯಸ್ಥರೂ ಆಗಿರುವ ನಿವೃತ್ತ ಮುಖ್ಯ ನ್ಯಾಯಮೂರ್ತಿ ವಿಕ್ರಮ್‌ಜೀತ್ ಸೇನ್ ಅವರು ತಿಳಿಸಿದ್ದಾರೆ.

ವಿಕಾಸ ಸೌಧದಲ್ಲಿ ಇಂದು ಸಮಿತಿಯ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ತಿದ್ದುಪಡಿಯ ಅಂಶಗಳ ಬಗ್ಗೆ ಮಾಹಿತಿ ನೀಡಿದರು. 2007 ರಲ್ಲಿ ರಾಜ್ಯ ಸರ್ಕಾರ ತಂದಿರುವ ಕಾನೂನಿಗೆ ಬಲಿಷ್ಠವಾದ ತಿದ್ದುಪಡಿ ತಂದು ಜನಸಾಮಾನ್ಯರಿಗೆ ರಾಜ್ಯದೆಲ್ಲೆಡೆ ಉತ್ತಮ ಗುಣಮಟ್ಟದ ಚಿಕಿತ್ಸೆ, ಚಿಕಿತ್ಸೆಯ ಸಂಪೂರ್ಣ ಮಾಹಿತಿ ಪಾರದರ್ಶಕವಾಗಿರುವಂತೆ ಎಲ್ಲಾ ಆಸ್ಪತ್ರೆಗಳು ದಾಖಲುಗಳನ್ನು ನಮೂದಿಸತಕ್ಕದ್ದು ಎಂದು ನ್ಯಾಯಮೂರ್ತಿ ವಿಕ್ರಮ್‌ಜೀತ್ ಸೇನ್ ತಿಳಿಸಿದರು.

ಕರ್ನಾಟಕದಲ್ಲಿ ಇರುವ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉತ್ತಮ ಚಿಕಿತ್ಸೆ ಲಭ್ಯವಾಗುತ್ತಿದೆ. ಇದನ್ನು ಇನ್ನಷ್ಟು ಪಾರದರ್ಶಕವಾಗಿರುವಂತೆ ಮಾಡುವುದೇ ಸಮಿತಿ ಮಾಡುವ ಶಿಫಾರಸ್ಸುಗಳಲ್ಲಿ ಇದು ಒಂದಾಗಲಿದೆ.

ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವ ರೋಗಿಗಳು ಹಾಗೂ ಅವರ ಕುಟುಂಬ ಸದಸ್ಯರಿಗೆ ಚಿಕಿತ್ಸಾ ವಿವರವನ್ನು ಒದಗಿಸತಕ್ಕದ್ದು. ನೊಂದಣಿ ಮಾಡಿಕೊಂಡ ಎಲ್ಲಾ ವೈದ್ಯರು ರೋಗಿಗಳಿಗೆ ನೀಡಿರುವ ಚಿಕಿತ್ಸಾ ವಿಧಾನವನ್ನು ಖಡ್ಡಾಯವಾಗಿ ದಾಖಲು ಮಾಡಬೇಕು.

ಜಿಲ್ಲಾ ಮತ್ತು ರಾಜ್ಯಮಟ್ಟದ ಪ್ರಾಧಿಕಾರಕ್ಕೆ ಕಾಲಕಾಲಕ್ಕೆ ಮಾಹಿತಿ ನೀಡಲು ಅನುಕೂಲವಾಗುವಂತೆ ಪ್ರಾಧಿಕಾರ ರಚಿಸುವಂತೆ ಮತ್ತೊಂದು ಶಿಫಾರಸ್ಸು ಮಾಡಿದೆ. ರೋಗಿಯ ಸಂಪೂರ್ಣ ವಿವರವನ್ನು ಆತನ ಕುಟುಂಬದ ಸದಸ್ಯರಿಗೆ ಖಡ್ಡಾಯವಾಗಿ ನೀಡಬೇಕು ಎಂದು ತಜ್ಞರ ಸಮಿತಿ ಸಲಹೆ ಮಾಡಿದೆ ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ.ಆರ್. ರಮೇಶ್‌ಕುಮಾರ್ ಅವರು ಮಾತನಾಡಿ, ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಜನಸಾಮಾನ್ಯರಿಗೆ ನೀಡುವ ಚಿಕಿತ್ಸೆ ಅದಕ್ಕೆ ವಿಧಿಸುವ ಶುಲ್ಕಗಳ ಮಾಹಿತಿಗಳನ್ನು ಖಡ್ಡಾಯವಾಗಿ ರೋಗಿಗೆ ನೀಡಬೇಕು. ರಾಜ್ಯದ ಅನೇಕ ಖಾಸಗಿ ಆಸ್ಪತ್ರೆಗಳಲ್ಲಿ ರೋಗಿಗಳಿಂದ ಭಾರಿ ಪ್ರಮಾಣದ ಶುಲ್ಕ ಸಂಗ್ರಹ ಮಾಡುವುದರ ಜೊತೆಗೆ ಚಿಕಿತ್ಸೆಯ ವಿವರವನ್ನು ಕುಟುಂಬದ ಸದಸ್ಯರಿಗೆ ನೀಡದೇ ಕತ್ತಲಲ್ಲಿ ಇಟ್ಟಿರುವ ಬಗ್ಗೆ ವ್ಯಾಪಕ ದೂರುಗಳ ಹಿನ್ನಲೆಯಲ್ಲಿ ಈಗಿರುವ ಕಾನೂನಿಗೆ ತಿದ್ದುಪಡಿ ಮಾಡಲು ನ್ಯಾಯಮೂರ್ತಿ ವಿಕ್ರಮ್‌ಜೀತ್ ಸೇನ್ ಸಮಿತಿ ನೇಮಕ ಮಾಡಲಾಗಿತ್ತು ಎಂದ ಸಚಿವರು ಸಮಿತಿ ವರದಿ ನೀಡಿದ ನಂತರ ಜೂನ್ ಮಾಹೆಯಲ್ಲಿ ನಡೆಯಲಿರುವ ವಿಧಾನ ಮಂಡಲದ ಅಧಿವೇಶನದಲ್ಲಿ ಮಂಡನೆ ಮಾಡಿ ಜನಸಾಮಾನ್ಯರಿಗೆ ಉತ್ತಮ ಚಿಕಿತ್ಸೆ ನೀಡುವ ಉತ್ತಮ ನಿರ್ಧಾರವನ್ನು ನೂತನ ಕಾಯ್ದೆಯಡಿ ಜಾರಿಗೆ ತರಲಾಗುವುದು ಎಂದು ತಿಳಿಸಿದರು.

ಖಾಸಗಿ ಆಸ್ಪತ್ರೆಗಳಲ್ಲಿ ಜನರನ್ನು ಶೋಷಣೆಯಿಂದ ಮುಕ್ತಗೊಳಿಸುವುದೇ ನೂತನ ಕಾಯ್ದೆಯ ಮುಖ್ಯ ಉದ್ದೇಶ ಎಂದು ಆರೋಗ್ಯ ಸಚಿವ ರಮೇಶ್‌ಕುಮಾರ್ ಅವರು ತಿಳಿಸಿದರು.

ಖಾಸಗಿ ಆಸ್ಪತ್ರೆಗಳಲ್ಲಿ ಜನರನ್ನೂ ಶೋಷಣೆಯಿಂದ ಮುಕ್ತಗೊಳಿಸುವುದೇ ನೂತನ ಕಾಯ್ದೆಯ ಮುಖ್ಯ ಉದ್ದೇಶ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ರಮೇಶ್‌ಕುಮಾರ್ ಅವರು ತಿಳಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ: ಶಾಲಿನಿ ರಜನೀಶ್ ಅವರು ಮಾತನಾಡಿ ಎಲ್ಲಾ ಆಸ್ಪತ್ರೆಗಳಲ್ಲಿ ಏಕರೂಪದ ಶುಲ್ಕ ಮತ್ತು ಚಿಕಿತ್ಸೆ ನೀಡುವುದು ನೂತನ ತಿದುಪಡಿಯ ಉದ್ದೇಶವಾಗಿದೆ ಎಂದು ತಿಳಿಸಿದರು.

## ಸಿಂಧೂ ತಾಯಿ ಸಪ್ಕಾಳ್ ಅವರಿಗೆ "ಬಸವ ರಾಷ್ಟ್ರೀಯ ಪುರಸ್ಕಾರ"– ಸಚಿವೆ ಉಮಾಶ್ರೀ

ಬೆಂಗಳೂರು, ಏಪ್ರಿಲ್ 28, (ಕರ್ನಾಟಕ ವಾರ್ತೆ)

2016ನೇ ಸಾಲಿನ ಬಸವ ರಾಷ್ಟ್ರೀಯ ಪುರಸ್ಕಾರವನ್ನು ಮಹಾರಾಷ್ಟ್ರದ ಸಮಾಜ ಸೇವಕಿ ಶ್ರೀಮತಿ ಸಿಂಧೂ ತಾಯಿಸಪ್ಕಾಳ್ ಅವರಿಗೆ ಘೋಷಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಸಚಿವೆ ಉಮಾಶ್ರೀ ಹೇಳಿದ್ದಾರೆ.

ಆದರೆ ಈ ಪ್ರಶಸ್ತಿಯನ್ನು ಬಸವ ಜಯಂತಿ ಸಂದರ್ಭದಲ್ಲಿ ಪ್ರದಾನ ಮಾಡಲಾಗುತ್ತಿಲ್ಲ. ಆದರ ಬದಲಾಗಿ ದಿನಾಂಕ 03.05.2017ರಂದು ಸನ್ಮಾನ್ಯ ಮುಖ್ಯಮಂತ್ರಿಗಳು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯಲಿರುವ ವಿವಿಧ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಪ್ರದಾನ ಮಾಡಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಸಿಂಧೂ ತಾಯಿ ಸಪ್ಕಾಳ್ ಅವರು ಅನಾಥ ಮಕ್ಕಳ ತಾಯಿ ಎಂದೇ ಹೆಸರಾದವರು. ಇವರು ಅನಾಥ ಮಕ್ಕಳ ಅಭ್ಯುದಯಕ್ಕಾಗಿ ಶ್ರಮಿಸುತ್ತಿದ್ದಾರೆ. ಇವರ ಸೇವೆಯನ್ನು ಗುರುತಿಸಿ ಇದುವರೆಗೂ ರಾಷ್ಟ್ರ ಮಟ್ಟದ 273 ಪ್ರಶಸ್ತಿಗಳು ಅವರಿಗೆ ಲಭ್ಯವಾಗಿದೆ. ಈ ಎಲ್ಲಾ ಪ್ರಶಸ್ತಿಗಳ ಮೊತ್ತವನ್ನು ಸನ್ಮತಿ ಬಾಲನಿಕೇತನ ಸಂಸ್ಥೆಯ ಮೂಲಕ ಅನಾಥ ಮಕ್ಕಳ ಕಲ್ಯಾಣಕ್ಕಾಗಿ ಬಳಸುತ್ತಿದ್ದಾರೆ. ಪ್ರಸ್ತುತ 300 ಮಕ್ಕಳನ್ನು ಅವರು ಪೋಷಿಸುತ್ತಿದ್ದಾರೆ. ಇವರ ಬಗ್ಗೆ ಚಲನಚಿತ್ರ ಕೂಡ ನಿರ್ಮಾಣವಾಗಿದೆ. ಈ ಪ್ರಶಸ್ತಿಯನ್ನು ನ್ಯಾ.ಎ.ಜೆ.ಸದಾಶಿವ ಅವರ ಅಧ್ಯಕ್ಷತೆಯ ಆಯ್ಕೆ ಸಮಿತಿ ಆಯ್ಕೆ ಮಾಡಿದೆ. ಈ ಪ್ರಶಸ್ತಿಯು 10.00 ಲಕ್ಷ ನಗದು ಹಾಗೂ ಸ್ಮರಣಿಕೆಯನ್ನು ಒಳಗೊಂಡಿದೆ ಎಂದು ಅವರು ಹೇಳಿದ್ದಾರೆ.

ಅದೇ ರೀತಿ 2016ನೇ ಸಾಲಿನ ಟಿ.ಚೌಡಯ್ಯ ರಾಷ್ಟ್ರೀಯ ಪ್ರಶಸ್ತಿಯನ್ನು ಚನ್ನೈನ ಪ್ರಸಿದ್ಧ ವಿದ್ವಾನ್ ಶ್ರೀ ಟಿ.ಹೆಚ್.ವಿನಾಯಕ ರಾಂ ಅವರಿಗೆ ನೀಡಲಾಗುತ್ತಿದೆ. ಈ ಪ್ರಶಸ್ತಿಯು 10.00 ಲಕ್ಷ ನಗದು ಹಾಗೂ ಸ್ಮರಣಿಕೆಯನ್ನು ಒಳಗೊಂಡಿದೆ ಎಂದು ಅವರು ಹೇಳಿದ್ದಾರೆ.

ಉಳಿದಂತೆ ರಾಜ್ಯ ಮಟ್ಟದ ಪ್ರಶಸ್ತಿಗಳ ವಿವರ ಈ ಕೆಳಕಂಡಂತಿದೆ.

| | |
|---|---|
| ಬಿ.ವಿ ಕಾರಾಂತ ಪ್ರಶಸ್ತಿ | ಶ್ರೀ ಶ್ರೀನಿವಾಸ ಜಿ ಕಪ್ಪಣ್ಣ |
| ಡಾ. ಗುಬ್ಬಿ ವೀರಣ್ಣ ಪ್ರಶಸ್ತಿ | ಶ್ರೀ ಚಿಂದೋಡಿ ಶ್ರೀಕಂಠೇಶ್ |
| ಸಂತ ಶಿಶುನಾಳ ಪ್ರಶಸ್ತಿ | ಶ್ರೀ ವೈ.ಕೆ ಮುದ್ದುಕೃಷ್ಣ |
| ನಿಜಗುಣಪುರಂದರ ಪ್ರಶಸ್ತಿ | ಪಂ.ಗಣಪತಿ ಭಟ್ ಹಾಸಣಗಿ |
| ಶಾಂತಲಾ ನಾಟ್ಯ ಪ್ರಶಸ್ತಿ | ಶ್ರೀಮತಿ ಉಷಾ ದಾತಾರ್ |
| ಪ್ರೋ.ಕೆ.ಜಿ.ಕುಂದಣಗಾರ ಗಡಿನಾಡ ಸಾಹಿತ್ಯ ಪ್ರಶಸ್ತಿ | ಶ್ರೀ ಹಸನ್ ನಯೀಂ ಸುರಕೋಡ |
| ದಾನ ಚಿಂತಾಮಣಿ ಅತ್ತಿಮಬ್ಬೆ ಪ್ರಶಸ್ತಿ | ಶ್ರೀಮತಿ ಶಾಂತಿ ನಾಯಕ |
| ಜಾನಪದ ಶ್ರೀ | ಶ್ರೀಮತಿ ಲಲಿತಾ ರಾಚಪ್ಪ ಪಾತ್ರೋಟ |
| ಕುಮಾರವ್ಯಾಸ ಪ್ರಶಸ್ತಿ | ಶ್ರೀ ಎನ್. ಆರ್. ಜ್ಞಾನಮೂರ್ತಿ |
| ಜಕಣಾಚಾರಿ ಪ್ರಶಸ್ತಿ | ಶ್ರೀ ವೈ. ಯಂಕಪ್ಪ |
| ವರ್ಣಶಿಲ್ಪಿ ವೆಂಕಟಪ್ಪ ಪ್ರಶಸ್ತಿ | ಶ್ರೀ ಮಹಾವೀರ ರಾಯಪ್ಪ ಬಾಳಿಕಾಯಿ |
| ಸಂಗೊಳ್ಳಿ ರಾಯಣ್ಣ ಪ್ರಶಸ್ತಿ | ಡಾ. ಚನ್ನಣ್ಣ ವಾಲೀಕಾರ |

ಈ ಎಲ್ಲಾ ಪ್ರಶಸ್ತಿಗಳು ತಲಾ 3.00 ಲಕ್ಷ ರೂ ನಗದು, ಸ್ಮರಣಿಕೆ ಹಾಗೂ ಅಭಿನಂದನಾ ಪತ್ರಗಳನ್ನು ಒಳಗೊಂಡಿವೆ. ಈ ಎಲ್ಲಾ ಪ್ರಶಸ್ತಿಗಳನ್ನು ದಿ 3.05.2017ರಂದು ಬುಧವಾರ ಸಂಜೆ 7.00 ಗಂಟೆಗೆ ಸನ್ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯುವ ಸಮಾರಂಭದಲ್ಲಿ ಪ್ರದಾನ ಮಾಡಿ ಗೌರವಿಸಲಿದ್ದಾರೆ ಎಂದು ಸಚಿವೆ ಉಮಾಶ್ರೀ ಹೇಳಿದ್ದಾರೆ.

## ಮಾಜಿ ಪ್ರಧಾನಿ ದಿ: ಇಂದಿರಾಗಾಂಧಿ ಜನ್ಮಶತಾಬ್ದಿ ಸಂದರ್ಭದಲ್ಲಿ ರಾಜ್ಯದಲ್ಲಿ 100 ವಸತಿ ಶಾಲೆ ಪ್ರಾರಂಭ– ಆಂಜನೇಯ

ಬೆಂಗಳೂರು, ಏಪ್ರಿಲ್ 28, (ಕರ್ನಾಟಕ ವಾರ್ತೆ)

ಮಾಜಿ ಪ್ರಧಾನಿ ದಿ: ಇಂದಿರಾಗಾಂಧಿ ಅವರ ಜನ್ಮ ಶತಾಬ್ದಿ ಚಿರಸ್ಥಾಯಿಗೊಳಿಸುವ ಸಂಬಂಧ ಅವರ ಹೆಸರಿನಲ್ಲಿ ಮುಂದಿನ ಶೈಕ್ಷಣಿಕ ಸಾಲಿನಲ್ಲಿ ನೂರು ವಸತಿ ಶಾಲೆಗಳನ್ನು ಆರಂಭ ಮಾಡಲಾಗುವುದೆಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್. ಆಂಜನೇಯ ಅವರು ಪ್ರಕಟಿಸಿದರು.

ವಿಧಾನ ಸೌಧದಲ್ಲಿಂದು ಸುದ್ದಿಗೋಷ್ಠಿನ್ನುದ್ದೇಶಿಸಿ ಮಾತನಾಡಿದ ಅವರು ಡಾ: ಬಿ.ಆರ್. ಅಂಬೇಡ್ಕರ್ ಅವರ 125ನೇ ಜನ್ಮಶತಮಾನೋತ್ಸವ ಅಂಗವಾಗಿಯೂ 125 ವಸತಿ ಶಾಲೆಗಳನ್ನು ಕೂಡ ಮುಂದಿನ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲಾಗುವುದು ಎಂದ ಸಚಿವರು ಪ್ರತಿ ಹೋಬಳಿಗೊಂದರಂತೆ ವಸತಿ ಶಾಲೆಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ಸುಮಾರು 1.24 ಲಕ್ಷ ವಿದ್ಯಾರ್ಥಿಗಳಿಗೆ ವಸತಿ ಶಾಲೆಗಳಲ್ಲಿ ಉಚಿತ ಶಿಕ್ಷಣ ಪ್ರಾಥಮಿಕ ಹಂತದಿಂದ ಪದವಿಪೂರ್ವ ಹಂತದ ವರೆಗೆ ನೀಡಲಾಗುತ್ತಿದೆ ಎಂದ ಸಚಿವರು ಈ ವಸತಿ ಶಾಲೆಗಳಿಗೆ

1849 ಬೋಧಕ ಹಾಗೂ 1246 ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ ಎಂದರು. ಈ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಶಿಕ್ಷಣ ಇಲಾಖೆಯ ಕೇಂದ್ರೀಕೃತ ದಾಖಲಾತಿ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುವುದು ಎಂದು ತಿಳಿಸಿದರು.